# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 170 |
| 2 | ಸದಸ್ಯರ ಹೆಸರು | : | ಶ್ರೀ ಅ. ದೇವೇಗೌಡ (ಪದವೀಧರ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 14.02.2024 |
| 4 | ಉತ್ತರಿಸುವವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಮನಗರ ಜಿಲ್ಲಾ ಕೇಂದ್ರವು ರೇಷ್ಮೆ ಮಾರುಕಟ್ಟೆಗೆ ಪ್ರಸಿದ್ಧಿಯಾಗಿದ್ದು, ರೇಷ್ಮೆ ಮಾರುಕಟ್ಟೆ ಕೇಂದ್ರವನ್ನು ಚನ್ನಪಟ್ಟಣ ಟೌನ್‌ನಲ್ಲಿರುವ ರೇಷ್ಮೆ ಇಲಾಖೆಯ ಅಧೀನದ ರೇಷ್ಮೆ ರೀಲಿಂಗ್ ಮತ್ತು ತರಬೇತಿ ಕೇಂದ್ರದ ಸ್ಥಳಕ್ಕೆ ಬದಲಾಯಿಸಿರುವುದು ನಿಜವೇ; | **2021-22ನೇ ಸಾಲಿನ ರಾಜ್ಯ ಸರ್ಕಾರದ ಆಯವ್ಯಯದಲ್ಲಿ ರಾಮನಗರದಲ್ಲಿ ಅತ್ಯಾಧುನಿಕ ಸೌಲಭ್ಯಗಳನ್ನೊಳಗೊಂಡ ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆಯನ್ನು ಮಾಡಲಾಗುವುದು ಎಂದು ಘೋಷಿಸಲಾಗಿದೆ. ಅದರಂತೆ ಚನ್ನಪಟ್ಟಣದಲ್ಲಿ ರೇಷ್ಮೆ ಇಲಾಖೆಗೆ ಸೇರಿದ ಸರ್ಕಾರಿ ರೇಷ್ಮೆ ತರಬೇತಿ ಸಂಸ್ಥೆ ಆವರಣದಲ್ಲಿ 11.38 ಎಕರೆ ಪ್ರದೇಶದಲ್ಲಿ ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆ ನಿರ್ಮಾಣ ಮಾಡಲು ಸ್ಥಳ ಆಯ್ಕೆ ಮಾಲಾಗಿದೆ.** |
| ಆ | ಹೈ-ಟೆಕ್ ರೇಷ್ಮೆ ಮಾರುಕಟ್ಟೆ ನಿರ್ಮಾಣ ಮಾಡಲು ಸರ್ಕಾರ ನಿರ್ಣಯಿಸಿ ಅನುಮೋದನೆ ನೀಡಿದ್ದು, ಸದರಿ ಸ್ಥಳದಲ್ಲಿ ಹೈ-ಟೆಕ್ ರೇಷ್ಮೆ ಮಾರಾಟ ಕೇಂದ್ರದ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿಗಾಗಿ ಸರ್ಕಾರ ನಿಗದಿಪಡಿಸಿರುವ ಅನುದಾನ ಎಷ್ಟು; | **ರೇಷ್ಮೆ ಭಾಗೀದಾರರ ಹಿತಕ್ಕಾಗಿ ನಬಾರ್ಡ್ ಸಹಯೋಗದೊಂದಿಗೆ ಹೈಟೆಕ್ ಸರ್ಕಾರಿ ರೇಷ್ಮೆ ಗೂಡು ಮಾರುಕಟ್ಟೆ ನಿರ್ಮಾಣಕ್ಕೆ ರೇಷ್ಮೆ ಇಲಾಖೆಯ ರೇಷ್ಮೆ ತರಬೇತಿ ಸಂಸ್ಥೆಯ ಆವರಣ, ಚನ್ನಪಟ್ಟಣದಲ್ಲಿ ರೂ. 75.00 ಕೋಟಿಗಳ ವೆಚ್ಚದಲ್ಲಿ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ನಿರ್ಣಯಿಸಿ ಅನುಮೋದನೆ ನೀಡಿದೆ. ಅದರಂತೆ ರೂ.75.00 ಕೋಟಿ ವೆಚ್ಚದಲ್ಲಿ ಹೈಟೆಕ್ ಸರ್ಕಾರಿ ರೇಷ್ಮೆ ಗೂಡು ಮಾರುಕಟ್ಟೆ ಕಾಮಗಾರಿ ನಡೆಯುತ್ತಿದೆ.** |
| ಇ | **ಪ್ರಸ್ತುತ ಈ ಮಾರಾಟ ಕೇಂದ್ರದ ಕಟ್ಟಡದ ಕಾಮಗಾರಿಯು ಯಾವ ಹಂತದಲ್ಲಿದೆ?** | **• ಭೂಮಿಯ ಸಮತಟ್ಟು ಮಾಡುವ ಕಾಮಗಾರಿ ಪೂರ್ಣಗೊಂಡಿದೆ.<br>• ತಳಪಾಯಕ್ಕೆ ಮಣ್ಣು ಅಗೆಯುವ ಕೆಲಸ ಪ್ರಗತಿಯಲ್ಲಿದೆ.<br>• ಮಾರುಕಟ್ಟೆ ಹಾಲ್-1 ಕಾಲಂ ಕಾಮಗಾರಿ ಶೇ 50ರಷ್ಟು ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿ ಪ್ರಗತಿಯಲ್ಲಿದೆ. Truss Work ಕಾಮಗಾರಿ ಪ್ರಗತಿಯಲ್ಲಿದೆ.<br>• ಕೋರ್ ಬ್ಲಾಕ್ ಕಟ್ಟಡದ ಕಾಲಂ ಕಾಮಗಾರಿ ಪೂರ್ಣಗೊಂಡಿದ್ದು, ಸ್ಟಿಲ್ ಫ್ಲೋರ್ ಮತ್ತು ನೆಲಮಹಡಿಗಳ ಮೇಲ್ಛಾವಣಿಯ ಕಾಮಗಾರಿ ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿ ಪ್ರಗತಿಯಲ್ಲಿದೆ.** |

**ಸಂಖ್ಯೆ:ರೇಷ್ಮೆ 54 ರೇಕೃವಿ 2024**

**(ಕೆ.ವೆಂಕಟೇಶ)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು